RNU AIR DHARWAD

DECEMBER 22, 2025

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು

- ಮಕ್ಕಳಲ್ಲಿ ಕ್ರೀಡಾ ಮನೋಭಾವನೆ ಬೆಳೆಸುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ.
- 12 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳುವುದಾಗಿ ಸಚಿವ ಎಸ್.ಮಧು ಬಂಗಾರಪ್ಪ ಭರವಸೆ.
- ಕಾರವಾರದಲ್ಲಿ ಕರಾವಳಿ ಉತ್ಸವ ಸಪ್ತಾಹ–2025 ಇಂದಿನಿಂದ ಆರಂಭ.
- ಇಂದು ರಾಷ್ಟ್ರೀಯ ಗಣಿತ ದಿನ.

ಈಗ ವಾರ್ತೆಗಳ ವಿವರ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕ್ರೀಡಾ ಚಟುವಟಿಕೆಗಳ ಅಭಿವೃದ್ಧಿ ಮತ್ತು ಕ್ರೀಡಾಪಟುಗಳ ಉನ್ನತಿಗಾಗಿ ನಿರಂತರವಾಗಿ ಸಕ್ರಿಯ ಪಾತ್ರ ವಹಿಸುತ್ತಿವೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ, ಕರ್ನಾಟಕ ಒಲಿಂಪಿಕ್ 2025 ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕ್ರೀಡೆ ಮಕ್ಕಳ ದೈಹಿಕ, ಮಾನಸಿಕ ಮತ್ತು ಬೌದ್ಧಿಕ ಬೆಳವಣಿಗೆಯನ್ನು ಹೆಚ್ಚಿಸುತ್ತದೆ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಲು ಅವರನ್ನು ಸಕ್ರಿಯಗೊಳಿಸುತ್ತದೆ. ಕ್ರೀಡೆಗಳಲ್ಲಿ ದೇಶದ ಪ್ರಾತಿನಿಧ್ಯವನ್ನು ಹೆಚ್ಚಿಸಲು, ತಳಮಟ್ಟದಲ್ಲಿ ಪ್ರತಿಭೆಯನ್ನು ಗುರುತಿಸುವುದು ಮತ್ತು ಅಭಿವೃದ್ಧಿಪಡಿಸುವುದು ಅಗತ್ಯ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶಗಳನ್ನು ವಿಸ್ತರಿಸುವ ಅವಶ್ಯಕತೆ ಇದೆ. ಕ್ರೀಡೆಯನ್ನು ವೃತ್ತಿಯಾಗಿ ಸಾಮಾಜಿಕ ಮನ್ನಣೆ ಮತ್ತು ಉದ್ಯೋಗ ಭದ್ರತೆಯನ್ನು ಒದಗಿಸುವ ಮೂಲಕ, ಯುವ ಪೀಳಿಗೆಯನ್ನು ಕ್ರೀಡೆಗಳನ್ನು ಮುಂದುವರಿಸಲು ಪ್ರೋತ್ಸಾಹಿಸಬೇಕಾಗಿದೆ ಎಂದರು.

<><><>

ಮುಂಬರುವ ಶೈಕ್ಷಣಿಕ ಸಾಲಿನ ಆರಂಭದೊಳಗಾಗಿ, ಕೊರತೆ ಇರುವ 12 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮ ವಹಿಸಲಾಗುವುದು. ರಾಜ್ಯದಲ್ಲಿ 2026ರ ಜನವರಿ ಮಾಸಾಂತ್ಯದೊಳಗಾಗಿ 900 ಕೆ.ಪಿ.ಎಸ್.ಶಾಲೆಗಳ ಆರಂಭಕ್ಕೆ ಮುನ್ನುಡಿ ಬರೆಯಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಗುಣಾತ್ಮಕ ಶಿಕ್ಷಣ, ರಚನಾತ್ಮಕ ಕಲಿಕಾ ತರಗತಿಗಳನ್ನು ನಡೆಸಲು ಸಹಕಾರಿಯಾಗುವಂತೆ ಪ್ರತಿ ಶಾಲೆಗಳಲ್ಲಿ ಆಡಳಿತ ಮಂಡಳಿ ರಚನೆಯಂತಹ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಶಾಲೆಗಳ ನೋಂದಣಿ, ನವೀಕರಣ ಪ್ರಕ್ರಿಯೆಯನ್ನು ಇನ್ನ ್ಟ ಸರಳೀಕರಣಗೊಳಿಸಲು ಸದನ ಸಮಿತಿ ರಚಿಸಲು ಸೂಚಿಸಲಾಗಿದೆ ಎಂದರು. ಮಕ್ಕಳಲ್ಲಿ ಭಾವನಾತ್ಮಕ ಸಂಬಂಧಗಳು ಗಟ್ಟಿಗೊಳ್ಳಲು ನೈತಿಕ ಶಿಕ್ಷಣ ಕಾರಣ. ಮಕ್ಕಳ ಶೈಕ್ಷಣಿಕ ಚಟುವಟಿಕೆಗಳಿಗೆ ಶಿಕ್ಷಕರ ಪ್ರೋತ್ಸಾಹದ ಜೊತೆಗೆ ಪೋ ೕಕರ ಸಹಕಾರವೂ ಅಗತ್ಯ. ಶಿಕ್ಷಕರ ಸಂಘಟಿತ ಶ್ರಮದಿಂದ ಶಾಲೆಗಳಲ್ಲಿ ಫಲಿತಾಂಶ ಸುಧಾರಣೆಯಾಗಲು ಸಾಧ್ಯ ಎಂದರು.

<><><>

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ರೈತರ ನಡುವಿನಸಂಬಂಧ ಗಟ್ಟಿಗೊಳ್ಳಬೇಕಾದರೆ ವಿಶ್ವವಿದ್ಯಾಲಯದಲ್ಲಿ ರೈತ ಸಂಪರ್ಕ ಕೇಂದ್ರ ತೆರೆಯುವುದು ಅಗತ್ಯವಾಗಿದೆ ಎಂದು ಅಬಕಾರಿ ಖಾತೆ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದ್ದಾರೆ.

ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಉದ್ಯಾಗಿರಿಯಲ್ಲಿ ಮೂರು ದಿನಗಳ ಕಾಲ ಆಯೋಜಿಸಲಾದ ತೋಟಗಾರಿಕೆ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ರೈತ ಸಂಪರ್ಕ ಕೇಂದ್ರ ಸ್ಥಾಪಿಸುವುದರ ಮೂಲಕ ರೈತರಿಗೆ ಬೇಕಾಗುವ ಹೊಸ ಸಂಶೋಧನೆ, ತಳಿಗಳ ಅಭಿವೃದ್ಧಿ ಹಾಗೂ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳುವುದು, ಸವಳು–ಜವಳು ಭೂಮಿಯಲ್ಲಿ ಬೆಳೆಯುವ ಬೆಳೆ, ಮಾರುಕಟ್ಟೆ ಸೇರಿದಂತೆ ಅಗತ್ಯ ವಿಷಯಗಳ ಕುರಿತು ಮಾಹಿತಿ ನೀಡಬೇಕು ಹಾಗೂ ರೈತರಲ್ಲಿರುವ ಜ್ಞಾನವನ್ನು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ಹಂಚಿಕೊಳ್ಳಲು ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದರು.

<><><>

ಕಾರವಾರದ ರವೀಂದ್ರನಾಥ ಟ್ಯಾಗೋರ್ ಕಡಲತೀರದಲ್ಲಿ ಕರಾವಳಿ ಉತ್ಸವ ಸಪ್ತಾಹ–2025 ಇಂದಿನಿಂದ ಆರಂಭವಾಗಿ ಇದೇ ತಿಂಗಳ 28 ರವರೆಗೆ ನಡೆಯಲಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕರಾವಳಿ ಉತ್ಸವದ ಕುರಿತು ಮಾಹಿತಿ ನೀಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದರು.

<><><>

ಇಂದು ರಾಷ್ಟ್ರೀಯ ಗಣಿತ ದಿನ. ಭಾರತದಲ್ಲಿ ಪ್ರತಿ ವರ್ಷ ಡಿಸೆಂಬರ್ 22 ರಂದು ಶ್ರೇಷ್ಠ ಗಣಿತತಜ್ಞ – ಶ್ರೀನಿವಾಸ ರಾಮಾನುಜನ್ ಅವರ ಜನ್ಮ ದಿನದಂದು ರಾಷ್ಟ್ರೀಯ ಗಣಿತ ದಿನವನ್ನು ಆಚರಿಸಲಾಗುತ್ತದೆ. ಗಣಿತದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಯುವಜನರಲ್ಲಿ ಗಣಿತದ ಬಗ್ಗೆ ಆಸಕ್ತಿ ಬೆಳೆಸುವುದು ಇದರ ಮುಖ್ಯ ಉದ್ದೇಶವಾಗಿದೆ. ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರವು, ರಾಷ್ಟ್ರೀಯ ಗಣಿತ ದಿನಾಚರಣೆ ಅಂಗವಾಗಿ, ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಇಂದು ಮಧ್ಯಾಹ್ನ 1 ಗಂಟೆಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಗಣಿತ ರಸಪ್ರಶ್ನೆ ಸ್ಪರ್ಧೆ ಹಾಗೂ ಉಪನ್ಯಾಸ ಕಾರ್ಯಕ್ರಮ ಆಯೋಜಿಸಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ತಿಂಗಳ 28 ರಂದು ಆಕಾಶವಾಣಿಯ"ಮನ್ ಕಿ ಬಾತ್" ಕಾರ್ಯಕ್ರಮದಲ್ಲಿ ದೇಶದ ಜನತೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನದ ಮಾತು ಬಾನುಲಿ ಭಾಷಣದ 129 ನೇ ಆವೃತ್ತಿಯಾಗಿದೆ. ಜನತೆ ಟೋಲ್ ಫ್ರೀ ಸಂಖ್ಯೆ 1800–11–7800 ಮೂಲಕ ಈ ಕಾರ್ಯಕ್ರಮಕ್ಕೆ ತಮ್ಮ ಆಲೋಚನೆಗಳು ಮತ್ತು ಸಲಹೆಗಳನ್ನು ಸಲ್ಲಿಸಬಹುದಾಗಿದೆ. 'ಮೋದಿ ಅಪ್ಲಿಕೇಶನ್ ಅಥವಾ 'ಮೈ ಗೌವ್' ಓಪನ್ ಫೋರಂ ಮೂಲಕ, ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಡಿಸೆಂಬರ್ 26 ಕೊನೆಯ ದಿನ.

<><><>

ಈಗ ಪ್ರಕಟಣೆ.

ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..

<><><>

( 56 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಐದು ವರ್ಷದ ಒಳಗಿನ ಮಕ್ಕಳಿಗೆ, ಪಲ್ಸ್ ಪೋಲಿಯೋ ಲಸಿಕೆ ಅಭಿಯಾನ ನಿನ್ನೆಯಿಂದ ಆರಂಭಗೊಂಡಿದ್ದು, ಇದೇ ತಿಂಗಳ 24ನೇ ತಾರೀಖಿನ ವರೆಗೆ, ದೇಶಾದ್ಯಂತ ಆಯೋಜಿತವಾಗಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ, ರಾಜ್ಯದಲ್ಲಿ ಜರುಗುತ್ತಿರುವ ಪೋಲಿಯೋ ಪ್ರತಿರೋಧ ಲಸಿಕೆ ನೀಡಿಕೆ ಕುರಿತು ಒಂದು ವರದಿ.

ಧ್ವನಿ –

*ರಾಷ್ಟ್ರೀಯ ಆರೋಗ್ಯ ಮಿಶನ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧೀನದಲ್ಲಿ, 'ಎರಡು ಹನಿಗಳು, ಪೋಲಿಯೋ ವಿರುದ್ಧ ನಿರಂತರ ಗೆಲುವು' ಎಂಬ ಧ್ಯೇಯದೊಂದಿಗೆ' ಆಯೋಜಿತ ಪೋಲಿಯೋ ಲಸಿಕೆ ನೀಡಿಕೆ ಅಭಿಯಾನವು ಸಂಪೂರ್ಣ ಪೋಲಿಯೋ ನಿರ್ಮೂಲನೆಯ ಗುರಿ ಹೊಂದಿದೆ.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು, ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿ ನೀಡುತ್ತಿದ್ದಾರೆ.ಮೊದಲ ದಿನದಂದು, ಬೆಳಗ್ಗೆ 8 ರಿಂದ ಸಂಜೆ 5 ಗಂಟೆಯ ವರೆಗೆ ಬೂತ್ ಮಟ್ಟದಲ್ಲಿ ಪೋಲಿಯೋ ಹನಿ ಹಾಕಲಾಯಿತು. ಆರೋಗ್ಯ ಕಾರ್ಯಕರ್ತೆಯರು ಇಂದಿನಿಂದ 24 ರ ವರೆಗೆ, ಮನೆ ಮನೆಗೆ ಭೇಟಿ ನೀಡಿ, ಪೋಲಿಯೋ ಹನಿ ನೀಡಲಿದ್ದಾರೆ. ವಿವಿಧ ಜಿಲ್ಲೆಗಳಲ್ಲಿ ಮೊಬೈಲ್ ಆರೋಗ್ಯ ಯುನಿಟ್ ಗಳು ಕಾರ್ಯಚರಿಸಲಿದ್ದು, ಆರೋಗ್ಯ ಸಿಬ್ಬಂದಿ ದುರ್ಗಮ ಪ್ರದೇಶಗಳಲ್ಲಿರುವ ಜನ ವಸತಿ ಕೇಂದ್ರಗಳು, ವಲಸೆ ಕಾರ್ಮಿಕರ ಮಕ್ಕಳಿಗೆ ಪೋಲಿಯೋ ಹನಿ ಹಾಕಲಿದ್ದಾರೆ.  ಧಾರವಾಡ ಜಿಲ್ಲೆಯಾದ್ಯಂತ ಆಯೋಜಿತ, ಪಲ್ಸ್ ಪೋಲಿಯೋ ಅಭಿಯಾನದ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಎಸ್.ಎನ್ ಹೊನಕೇರಿ*

<><><>

ವಿವೇಕ+ ಎಸ್.ಎನ್ ಹೊನಕೇರಿ (130 ಸೆಕೆಂದುಗಳು)

<><><>

ಗ್ರಾಮೀಣ ಉದ್ಯೋಗ ನೀತಿಯಲ್ಲಿ ಮಹತ್ವದ ಮೈಲಿಗಲ್ಲು ತರುವ ಪರಿವರ್ತನಾತ್ಮಕ ವಿಕಸಿತ ಭಾರತ –ರೋಜ್‌ಗಾರ್ ಮತ್ತು ಆಜೀವಿಕಾ ಮಿ ´ನ್ ಗ್ರಾಮೀಣ ಖಾತ್ರಿ – ವಿಬಿ –ಜಿ ರಾಮ್ ಜಿ ಮಸೂದೆ 2025ಕ್ಕೆ ರಾಷ್ಟ್ರಪತಿ ಅಂಕಿತ ಹಾಕಿದ್ದಾರೆ. ಈ ಕಾಯ್ದೆ ಗ್ರಾಮೀಣ ಕುಟುಂಬಗಳಿಗೆ ಪ್ರತಿ ಹಣಕಾಸು ವ ´ದಲ್ಲಿ 125 ದಿನಗಳ ವೇತನ ಸಹಿತ ಉದ್ಯೋಗ ಖಾತ್ರಿಯನ್ನು ಖಚಿತಪಡಿಸುತ್ತದೆ ಮತ್ತು ಸಬಲೀಕರಣವನ್ನು ಉತ್ತೇಜಿಸುತ್ತದೆ ಎಂದು ಕೇಂದ್ರ ಕೃಷಿ ಖಾತೆ ಸಚಿವ ಶಿವರಾಜ ಸಿಂಗ ಚೌಹಾಣ ತಿಳಿಸಿದ್ದಾರೆ.

<><><>

ಧ್ವನಿ ಶಿವರಾಜ ಸಿಂಗ ಚೌಹಾಣ 46 ಸೆಕೆಂದುಗಳು

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಮಕ್ಕಳಲ್ಲಿ ಕ್ರೀಡಾ ಮನೋಭಾವನೆ ಬೆಳೆಸುವಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ.
- 12 ಸಾವಿರ ಶಿಕ್ಷಕರ ನೇಮಕಾತಿಗೆ ಕ್ರಮ ಕೈಗೊಳ್ಳುವುದಾಗಿ  ಸಚಿವ ಎಸ್.ಮಧು ಬಂಗಾರಪ್ಪ ಭರವಸೆ.
- ಕಾರವಾರದಲ್ಲಿ ಕರಾವಳಿ ಉತ್ಸವ ಸಪ್ತಾಹ–2025  ಇಂದಿನಿಂದ ಆರಂಭ.
- ಇಂದು ರಾಷ್ಟ್ರೀಯ ಗಣಿತ ದಿನ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>